ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE 9/9/2020

**ಸ್ಮಾರ್ಟ್ ಸಿಟಿ ಯೋಜನೆಯಡಿ 36 ರಸ್ತೆ ಅಭಿವೃದ್ಧಿ: ಮುಖ್ಯಮಂತ್ರಿ**

# ವೀರ ಸಾವರ್ಕರ್ ಮೇಲ್ಸೇತುವೆ ಉದ್ಘಾಟನೆ

ಪ್ರ.ವಾ. 9-9-2020

ಪ್ರಜಾವಾಣಿ ವಾರ್ತೆ

ಯಲಹಂಕ: 'ನಗರೋತ್ಥಾನ ವಿಶೇಷ ಮೂಲಭೂತ ಸೌಕರ್ಯ ಮತ್ತು ಸರೋವರ ಅಭಿವೃದ್ಧಿ ಯೋಜನೆ'ಯಡಿ ನಗರದ ಸಮಗ್ರ ಅಭಿವೃದ್ಧಿಗಾಗಿ ಪಾಲಿಕೆಗೆ ₹7300 ಕೋಟಿ ಅನುದಾನ ಒದಗಿಸಲಾಗಿದ್ದು, ಯೋಜನೆಗಳನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ' ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು.

ಮೇಜರ್ ಸಂದೀಪ್ ಉನ್ನಿಕೃಷ್ಣನ್ ರಸ್ತೆಯ ಮದರ್ ಡೇರಿ ವೃತ್ತದ ಬಳಿ ನಿರ್ಮಿಸಿರುವ 'ಸ್ವಾತಂತ್ರ್ಯ ಸೇನಾನಿ ವೀರ ಸಾವರ್ಕರ್ ಮೇಲ್ಸೇತು-ವೆ'ಯನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದರು.



ನೂತನ ಮೇಲ್ಸೇತುವೆಯಲ್ಲಿ ವಾಹನಗಳು ಸಂಚರಿಸಿದವು –ಪ್ರಜಾವಾಣಿ ಚಿತ್ರ

'ಸ್ಮಾರ್ಟ್ ಸಿಟಿ ಯೋಜನೆಯಡಿ 30 ಕಿ.ಮೀ ಉದ್ದದ 36 ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗುವುದು. ನಗರೋತ್ಥಾನ ಯೋಜನೆಯಡಿ ಯಲಹಂಕ ಕ್ಷೇತ್ರದ ಅಭಿವೃದ್ಧಿಗೆ ₹ 400 ಕೋಟಿ ಅನುದಾನ ನೀಡಲಾಗಿದೆ' ಎಂದರು.

ಶಾಸಕ ಎಸ್.ಆರ್.ವಿಶ್ವನಾಥ್ ಮಾತನಾಡಿ, 'ದೇಶಭಕ್ತಿ ಎಲ್ಲೆಡೆ ಮೂಡಬೇಕು ಎಂಬ ಉದ್ದೇಶದಿಂದ ಮೇಲ್ಸೇತುವೆಗೆ ವೀರ ಸಾವರ್ಕರ್ ಹೆಸರನ್ನಿಡಲಾಗಿದೆ. ಇದನ್ನು ವಿರೋಧಿಸುವವರು ಸಾವರ್ಕರ್ ಅವರ ಜೀವನಚರಿತ್ರೆ ಓದಬೇಕು. ಯಲಹಂಕದಲ್ಲಿ ಇದೇ ಮಾದರಿಯಲ್ಲಿ ಇನ್ನೂ 4 ಮೇಲ್ಸೇತುವೆಗಳನ್ನು ನಿರ್ಮಿ-ಸಲಾಗುವುದು' ಎಂದು ತಿಳಿಸಿದರು.

Bengaluru